ಇ) ಕಳೆದ ವರ್ಷ ಹಣ ಬಿಡುಗಡೆ ಮಾಡದೇ ಇರುವುದರಿಂದ ಬೆಳಗಾವಿ ಜಿಲ್ಲೆಯಲ್ಲಿ ತೆಗ್ಗುಗಳನ್ನು ತುಂಬದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ತಗ್ಗುಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದೆ;

ಉ) ಬೈಲಹೊಂಗಲ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ತಗ್ಗುಗಳು ಬಿದ್ದಿದ್ದಕ್ಕಾಗಿ ಹೆಚ್ಚಿನ ಹಣ ಒದಗಿಸಿ ತೆಗ್ಗುಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದೆ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

ಅ) ಬೆಳಗಾವಿ ಜಿಲ್ಲೆಯಲ್ಲಿ 2002–03ನೇ ಸಾಲಿಗೆ ಲೆಕ್ಕ ಶೀರ್ಷಿಕೆ 3054 ರಡಿಯಲ್ಲಿ ಒಟ್ಟು 952.38 ಲಕ್ಷ ರೂ. ಅನುದಾನವನ್ನು ಬಿಡುಗಡೆ ಮಾಡಲಾಗಿತ್ತು.

ಆ)

ಕ್ರಮ ಸಂಖ್ಯೆ	ಉಪ ವಿಭಾಗದ ಹೆಸರು	2002–03ನೇ ಸಾಲಿನ ಅನುದಾನ	ಬಾಕಿ ಇರುವ ಬಿಲ್ ಮೊತ್ತ
1	ಬೆಳಗಾವಿ	63.37	92.10
2	ಸವದತ್ತಿ	138.46	140.65
3	ರಾಮದುರ್ಗ	64.75	70.35
4	ಬೈಲಹೊಂಗಲ	80.40	113.69
5	ಖಾನಾಪೂರ	52.70	90.17
6	ಚಿಕ್ಕೋಡಿ	131.70	204.61
7	ಹುಕ್ಕೇರಿ	59.92	205.00
8	ಅಥಣಿ	167.48	136.40
9	ರಾಯಬಾಗ	74.35	68.00
10	ಗೋಕಾಕ	119.25	68.03
	ಒಟ್ಟು	**952.38**	**1189.00**

ಇ) ಕಳೆದ ವರ್ಷ ಬಿಡುಗಡೆಯಾದ ಹಣದಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಶೇಕಡಾ 83 ರಷ್ಟು ಲೋಇ ರಸ್ತೆಗಳ ತಗ್ಗು ಗುಂಡಿಗಳನ್ನು ಮುಚ್ಚಿ ರಸ್ತೆಗಳನ್ನು ಸುಸ್ಥಿಯಲ್ಲಿರಿಸಲಾಗಿದೆ.

ಈ) ತಗ್ಗುಗಳನ್ನು ತುಂಬಿ ರಸ್ತೆಗಳನ್ನು ಸುಸ್ಥಿತಿಯಲ್ಲಿರಿಸುವ ಕಾರ್ಯವನ್ನು 2003–04ನೇ ಸಾಲಿನ ಅನುದಾನದ ಲಭ್ಯತೆ ಮೇರೆಗೆ ಕೈಗೊಳ್ಳಲಾಗುವುದು.

ಉ) ಬೈಲಹೊಂಗಲ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ರಸ್ತೆಗಳಲ್ಲಿ ಬಿದ್ದಿರುವ ತಗ್ಗುಗಳನ್ನು ಅನುದಾನದ ಲಭ್ಯತೆ ಮೇರೆಗೆ ಮುಚ್ಚಲು ಕ್ರಮ ಕೈಗೊಳ್ಳಲಾಗುವುದು.

ಬೆಳಗಾವಿ ಜಿಲ್ಲೆ ಬೈಲಹೊಂಗಲ ಕ್ರೀಡಾಂಗಣಕ್ಕೆ ಹಣ ಮಂಜೂರಾತಿ

2461 (3148) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ನಗರದಲ್ಲಿ ಕ್ರೀಡಾಂಗಣ ಕಟ್ಟಲು ಕೇಂದ್ರ ಸರ್ಕಾರದಿಂದ ಎಷ್ಟು ಹಣವನ್ನು ಮಂಜೂರು ಮಾಡಲಾಗಿತ್ತು;

ಆ) ಕ್ರೀಡಾಂಗಣ ಕಮಿಟಿಯವರು ಕ್ರೀಡಾಂಗಣ ಕಟ್ಟಲು ಹಣ ನಿಗಧಿತ ವೇಳೆಯಲ್ಲಿ ಖರ್ಚು ಮಾಡಿದ್ದರೂ ಕೂಡಾ ರಾಜ್ಯ ಸರ್ಕಾರದವರು ಯುಟಿಲೈಜೇಷನ್ ಸರ್ಟಿಫಿಕೇಟನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸದೇ ಇದ್ದುದರಿಂದ ಕೇಂದ್ರ ಸರ್ಕಾರದವರು ಹಣ ಲ್ಯಾಪ್ಸ್ ಮಾಡಿದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಯುಟಿಲೈಜೇಷನ್ ಸರ್ಟಿಫಿಕೇಟ್ ಕಳುಹಿಸದೇ ಹಣ ಲ್ಯಾಪ್ಸ್ ಆಗಲು ಕಾರಣವಾದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗುವುದೆ;

ಈ) ಇಲಾಖೆಯ ಅಧಿಕಾರಿಗಳು ಲ್ಯಾಪ್ಸ್ ಆದ ಸಂಗತಿಯನ್ನು ಮುಚ್ಚಿಸಿಕೊಳ್ಳುವ ಸಲುವಾಗಿ ತಪ್ಪು ಮಾಹಿತಿಯನ್ನು ಸರ್ಕಾರಕ್ಕೆ ಹಾಗೂ ವಿಧಾನಸಭೆಗೆ ಕೊಡುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಉನ್ನತ ಮಟ್ಟದ ಅಧಿಕಾರಿಗಳ ಕಮಿಟಿ ನೇಮಿಸಿ, ಹಣ ಲ್ಯಾಪ್ಸ್ ಮಾಡಿದ ಅಧಿಕಾರಿಗಳ ಮೇಲೆ ವಿಚಾರಣೆ ನಡೆಸಿ ಕ್ರಮ ಕೈಗೊಳ್ಳಲಾಗುವುದೆ;

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ (ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು):

ಅ) ರೂ. 18.00 ಲಕ್ಷಗಳ ಅನುದಾನ ಬಿಡುಗಡೆಗೆ ತಾತ್ವಿಕ ಅನುಮೋದನೆ ನೀಡಲಾಗಿತ್ತು.

ಆ) ಕ್ರೀಡಾಂಗಣ ಸಮಿತಿಯವರು ನಿಗಧಿತ 2 ವರ್ಷದ ಅವಧಿಯಲ್ಲಿ ಕನಿಷ್ಠ ರೂ. 19.00 ಲಕ್ಷಗಳ ಕಾಮಗಾರಿ ಪೂರ್ಣಗೊಳಿಸುವ ಬದಲು ಕೇವಲ ರೂ. 9.03 ಲಕ್ಷಗಳ ಕಾಮಗಾರಿ ಪ್ರಗತಿ ತೋರಿಸಿರುವುದರ ಕಾರಣ ಕೇಂದ್ರ ಸರ್ಕಾರವು ಮಂಜೂರಾತಿ ಆದೇಶವನ್ನು ರದ್ದುಗೊಳಿಸಿದೆ.

ಇ) ಉದ್ಭವಿಸುವುದಿಲ್ಲ.

ಈ) ತಪ್ಪು ಮಾಹಿತಿಯನ್ನು ಸಲ್ಲಿಸಿರುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಬೆಳಗಾವಿ ಜಿಲ್ಲೆಯಲ್ಲಿ ಬರಗಾಲ ಕಾಮಗಾರಿ ಯೋಜನೆಯಡಿಯಲ್ಲಿ ಅಭಿವೃದ್ಧಿ

2462 (3149) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ : ಮಾನ್ಯ ಕಂದಾಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯಲ್ಲಿ ಈ ವರ್ಷ ಬರಗಾಲ ಕಾಮಗಾರಿ ಕೆಲಸಗಳಿಗೆ ಹಾಗೂ ಕುಡಿಯುವ ನೀರಿಗಾಗಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿತ್ತು;

ಆ) ಎಷ್ಟು ಕೆಲಸಗಳು ಪೂರ್ಣಗೊಂಡಿರುತ್ತವೆ ಹಾಗೂ ಅರ್ಧಕ್ಕೆ ನಿಂತ ಕೆಲಸಗಳನ್ನು ಪೂರ್ಣಗೊಳಿಸಲು ಇನ್ನೂ ಎಷ್ಟು ಹಣ ಬೇಕಾಗುವುದು;

ಇ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಗೋಶಾಲೆಗಳನ್ನು ತೆರೆಯಲಾಗಿದೆ;

ಈ) ಗೋಶಾಲೆಗಳನ್ನು ತೆರೆಯದೇ ಇರುವುದರಿಂದ ರೈತರು ತಮ್ಮ ದನಗಳನ್ನು ಕಸಾಯಿಖಾನೆಗೆ ಕಳುಹಿಸಲು ಕಟುಕರಿಗೆ ಮಾರುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೆ;

ಉ) ಹಾಗಿದ್ದಲ್ಲಿ, ರೈತರು ದನಗಳನ್ನು ಕಟುಕರಿಗೆ ಮಾರುವುದನ್ನು ತಡೆಗಟ್ಟಲು ಬೆಳಗಾವಿ ಜಿಲ್ಲೆಯಲ್ಲಿ ಗೋಶಾಲೆಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗುವುದೆ: